# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 77 | Pages. 2 | Date: 21-02-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 77 - ಪುಟಗಳು : 2 | 21-02-2026 | ಶನಿವಾರ | Ph: 8762954248 | ದರ : ₹1


# ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಜಿಲ್ಲಾಡಳಿತ ಸನ್ನದ್ಧ

## ಬಾಲಕರಿಗೂ ಉಚಿತ ಪ್ರಯಾಣ ಸೌಲಭ್ಯ | ಪರೀಕ್ಷಾ ಕೇಂದ್ರಗಳ ಸುತ್ತ ಕಣ್ಗಾವಲು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ 2026ನೇ ಸಾಲಿನ ದ್ವಿತೀಯ ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಲು ಜಿಲ್ಲಾಡಳಿತದಿಂದ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದ್ವಿತೀಯ ಪಿಯುಸಿ ಪರೀಕ್ಷೆ ಫೆ.28 ರಿಂದ ಮಾ.17 ರವರೆಗೆ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾ.18 ರಿಂದ ಏ.2 ರ ವರೆಗೆ ನಡೆಯಲಿದ್ದು, ಪರೀಕ್ಷೆಗೆ ಅಗತ್ಯವಿರುವ ಸಿದ್ಧತೆ ಕೈಗೊಳ್ಳಲಾಗಿದೆ ಎಂದರು.

ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಜಿಲ್ಲಾ ಪಂಚಾಯಿತಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಯಿಂದ ಸಿದ್ಧತೆ ಮಾಡಿಕೊಳ್ಳಾಗಿದ್ದು, ದ್ವಿತೀಯ ಪಿಯುಸಿ ಪರೀಕ್ಷೆಯೂ ಪ್ರತಿದಿನ ಬೆ.10 ಗಂಟೆಗೆ ಪ್ರಾರಂಭವಾಗಿ ಮಧ್ಯಾಹ್ನ 1 ಗಂಟೆವರೆಗೆ ನಡೆಯಲಿದೆ ಎಂದರು.

ಜಿಲ್ಲೆಯಲ್ಲಿ 14,759 ಹೊಸ ವಿದ್ಯಾರ್ಥಿಗಳು, 305 ಖಾಸಗಿ ಅಭ್ಯರ್ಥಿಗಳು, 715 ಪುನರಾವರ್ತಿತ ವಿದ್ಯಾರ್ಥಿಗಳು ಇವರಲ್ಲಿ 6167 ಬಾಲಕರು, 8592 ಬಾಲಕಿಯರು ಸೇರಿದಂತೆ ಒಟ್ಟು 15,782 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಹಾಸನ ನಗರದಲ್ಲಿ-12, ಆಲೂರು-01, ಅರಸೀಕೆರೆ-06, ಅರಕಲಗೂಡು-03, ಬೇಲೂರು-02, ಚನ್ನರಾಯಪಟ್ಟಣ-04, ಜಾವಗಲ್-01, ಹೊಳೆನರಸೀಪುರ-03, ಸಕಲೇಶಪುರ-01 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 33 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಎಂದರು.

### ಎಸ್‌ಎಸ್‌ಎಲ್‌ಸಿ 20 ಸಾವಿರ ವಿದ್ಯಾರ್ಥಿಗಳು

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 19,718 ಹೊಸ ವಿದ್ಯಾರ್ಥಿಗಳು, 343 ಖಾಸಗಿ ಅಭ್ಯರ್ಥಿಗಳು, 615 ಪುನರಾವರ್ತಿತ ವಿದ್ಯಾರ್ಥಿಗಳು, 74 ಖಾಸಗಿ ಪುನರಾವರ್ತಿತ ವಿದ್ಯಾರ್ಥಿಗಳು ಇದರಲ್ಲಿ 9904 ಬಾಲಕರು ಮತ್ತು 9814 ಬಾಲಕಿಯರಿದ್ದು, ಗ್ರಾಮೀಣ 12823 ಹಾಗೂ ನಗರ ಪ್ರದೇಶದ 6895 ವಿದ್ಯಾರ್ಥಿ ಸೇರಿದಂತೆ ಒಟ್ಟು 20,750 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಜಿಲ್ಲೆಯಲ್ಲಿ ಒಟ್ಟು 78 ಪರೀಕ್ಷಾ ಕೇಂದ್ರಗಳಿದ್ದು ಈ ಪೈಕಿ ಹಾಸನ ನಗರದಲ್ಲಿ 16, ಆಲೂರು-05, ಅರಸೀಕೆರೆ-11, ಅರಕಲಗೂಡು-09, ಬೇಲೂರು-07, ಚನ್ನರಾಯಪಟ್ಟಣ-12,



> ಮಲೆನಾಡು ಭಾಗದಲ್ಲಿ ಪರೀಕ್ಷಾ ಕೇಂದ್ರಕ್ಕೆ ಬರಲು ವಿದ್ಯಾರ್ಥಿಗಳಿಗೆ ತೊಂದರೆಯಾದರೆ ಅಂತವರಿಗೆ ಪರೀಕ್ಷಾ ಕೇಂದ್ರದಲ್ಲೇ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗುವುದು. ಈ ಸಂಬಂಧ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ.
>
> **- ಕೆ.ಎಸ್.ಲತಾಕುಮಾರಿ, ಜಿಲ್ಲಾಧಿಕಾರಿ**

ಹೊಳೆನರಸೀಪುರ-09, ಸಕಲೇಶಪುರ-09 ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದೆ ಎಂದರು.

ಪರೀಕ್ಷೆ ನಡೆಯುವ ದಿನಗಳಲ್ಲಿ ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತಮುತ್ತ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಸಮೀಪದಲ್ಲಿರುವ ಜೆರಾಕ್ಸ್ ಅಂಗಡಿ ಮತ್ತು ಸೈಬರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶ ಹೊರಡಿಸಲಾಗಿದೆ ಎಂದರು.

ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ, ಪಾರದರ್ಶಕತೆಯಿಂದ ಪರೀಕ್ಷೆ ನಡೆಸಲು ಹಾಗೂ ಪರೀಕ್ಷಾ ಅಕ್ರಮ ತಡೆಗಟ್ಟಲು ಸಿ.ಸಿ. ಕ್ಯಾಮೆರಾ ಕಣ್ಗಾವಲು ವ್ಯವಸ್ಥೆ ಮಾಡಲಾಗಿದೆ ವೆಬ್ ಕಾಸ್ಟಿಂಗ್ ಕಣ್ಗಾವಲಿನಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳ ಚಲನವಲನ ವೀಕ್ಷಿಸಬಹುದಾಗಿದೆ ಎಂದರು.

ಜಿಲ್ಲಾ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ವಿತರಿಸಲು ತಹಸೀಲ್ದಾರ್, ಕೇತ್ರ ಶಿಕ್ಷಣಾಧಿಕಾರಿಗಳು, ಪ್ರಾಂಶುಪಾಲರನ್ನೊಳಗೊಂಡ ಪ್ರಶ್ನೆಪತ್ರಿಕೆ ಪಾಲಕರ ತ್ರಿಸದಸ್ಯ ಸಮಿತಿ ರಚಿಸಲಾಗಿದೆ ಎಂದರು.

ಪ್ರಶ್ನೆ ಪತ್ರಿಕೆಗಳನ್ನು 10 ಮಾರ್ಗಗಳಲ್ಲಿ ವಿತರಿಸುವ ವಾಹನಗಳಿಗೆ ಜಿಪಿಎಸ್ ಟ್ರ್ಯಾಕಿಂಗ್ ಅಳವಡಿಸಲಾಗಿದೆ. ಶಸ್ತ್ರಸಜ್ಜಿತ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗುವುದು. ಪರೀಕ್ಷಾ ಕೇಂದ್ರಗಳಲ್ಲಿ ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಬೇರಾವುದೇ ಸಿಬ್ಬಂದಿ ಮೊಬೈಲ್ ಬಳಕೆ ನಿಷೇಧಿಸಲಾಗಿದೆ. ಪರೀಕ್ಷಾ ಸಿಬ್ಬಂದಿ ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕು ಎಂದರು.

ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್, ಬ್ಲೂ ಟೂತ್ ಸೇರಿದಂತೆ ಯಾವುದೇ ವಿದ್ಯುನ್ಮಾನ ಉಪಕರಣ ನಿಷೇಧಿಸಲಾಗಿದೆ, ಪರೀಕ್ಷಾ ಸಿಬ್ಬಂದಿ ಹೊರತುಪಡಿಸಿ ಪರೀಕ್ಷೆಗೆ ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದ ಪ್ರವೇಶಕ್ಕೆ ಅವಕಾಶ ಇರುವುದಿಲ್ಲ ಎಂದರು.

ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಸ್ಥಾನಿಕ ಜಾಗೃತ ದಳ ಮತ್ತು ತಾಲ್ಲೂಕುವಾರು ಸಂಚಾರಿ ಜಾಗೃತ ದಳ ತಂಡವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ನಿಯೋಜಿಲಾಗಿದೆ ಎಂದು ತಿಳಿಸಿದರು.

ಪರೀಕ್ಷಾ ಕೇಂದ್ರಗಳಿಗೆ ನಿರಂತರ ವಿದ್ಯುತ್ ನೀಡಲು ಸೆಸ್ಕ್‌ಗೆ ಸೂಚಿಸಲಾಗಿದೆ. ಸಾರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣ ವ್ಯವಸ್ಥೆ ಮಾಡಲಾಗಿದೆ. ಹಾಗೆಯೇ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಆರೋಗ್ಯ ತಂಡವನ್ನು ನೇಮಿಸಲಾಗಿದೆ ಎಂದರು.

ವಿದ್ಯಾರ್ಥಿಗಳು ಪ್ರತಿ ದಿನ 40 ನಿಮಿಷ ಮುಂಚಿತವಾಗಿ ಪರೀಕ್ಷಾ ಕೇಂದ್ರ ತಲುಪಬೇಕು. ಯಾವುದೇ ಗೊಂದಲಕ್ಕೆ ಒಳಗಾಗದೇ ನಿರ್ಭಿತಿಯಿಂದ ಪರೀಕ್ಷೆ ಬರೆಯಬೇಕೆಂದು ತಿಳಿಸಿದರು.

ವಿಕಲಚೇತನ ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ವಾಚಕರು, ಸಹಾಯಕರು ಮತ್ತು ಸಹಾಯಕ ಬರಹಗಾರರನ್ನು ನೇಮಿಸಿಕೊಳ್ಳಬಹುದು. ಉತ್ತರಿಸಬೇಕಾದ ಸಮಯದಲ್ಲಿ 1 ಗಂಟೆ ಹೆಚ್ಚಿನ ಕಾಲಾವಕಾಶ ನೀಡಲಾಗಿದೆ, ನೆಲ ಮಹಡಿಯಲ್ಲಿ ಸೂಕ್ತ ಆಸನದ ವ್ಯವಸ್ಥೆ ಮಾಡಲಾಗುತ್ತದೆ ಎಂದು ತಿಳಿಸಿದರು.

## ವಿದ್ಯಾರ್ಥಿಗಳ ಸುರಕ್ಷತೆಗೆ ಆದ್ಯತೆ ನೀಡಿ: ಸಂಸದ ಶ್ರೇಯಸ್

ಫೆ. 28 ರಿಂದ ಮಾ.17ರ ವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ ನಡೆಯಲಿದ್ದು ಪೂರ್ವ ತಯಾರಿ ಕುರಿತು ಹಾಸನದ ಸಂಸದರ ಕಚೇರಿಯಲ್ಲಿ ಪದವಿಪೂರ್ವ ಶಿಕ್ಷಣ ಉಪ ನಿರ್ದೇಶಕರು ಮತ್ತು ಪರೀಕ್ಷಾ ಕೇಂದ್ರಗಳ ಪ್ರಾಚಾರ್ಯರೊಂದಿಗೆ ಸಂಸದ ಶ್ರೇಯಸ್ ಪಟೇಲ್ ಸಭೆ ನಡೆಸಿದರು.

ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ನಮ್ಮ ಜಿಲ್ಲೆ ಪ್ರಥಮ ಸ್ಥಾನದಲ್ಲಿ ಬರುವಂತೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲಾದ್ಯಂತ 14759 ಹೊಸ ವಿದ್ಯಾರ್ಥಿಗಳು, 305 ಖಾಸಗಿ ಅಭ್ಯರ್ಥಿಗಳು, 715 ಪುನರಾವರ್ತಿತ ವಿದ್ಯಾರ್ಥಿಗಳು ಸೇರಿ 15782 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಜಿಲ್ಲಾದ್ಯಂತ 33 ಪರೀಕ್ಷಾ ಕೇಂದ್ರ ತೆರೆಯಲಾಗುತ್ತಿದೆ.

ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಕಲ್ಪಿಸಿದ್ದು ಹಾಲ್ ಟಿಕೆಟ್ ತೋರಿಸಿ ಉಚಿತವಾಗಿ ಪ್ರಯಾಣಿಸಬಹುದು. ಮಲೆನಾಡು ಭಾಗದಲ್ಲಿ ಮಕ್ಕಳನ್ನು ಸುರಕ್ಷಿತವಾಗಿ ಪರೀಕ್ಷಾ ಕೇಂದ್ರಕ್ಕೆ ಕರೆತರುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಶ್ರೇಯಸ್ ಪಟೇಲ್ ಹೇಳಿದ್ದಾರೆ.

ಕೇಂದ್ರಗಳಲ್ಲಿ ನೀರಿನ ವ್ಯವಸ್ಥೆ, ಮೂಲ ಸೌಕರ್ಯಗಳ ಬಗ್ಗೆ ಹಾಗೂ ಪ್ರಶ್ನೆ



ಪತ್ರಿಕೆ ಮತ್ತು ಉತ್ತರ ಪತ್ರಿಕೆಗಳ ತೆಗೆದುಕೊಂಡು ಹೋಗುವಾಗ ಕಟ್ಟುನಿಟ್ಟಿನ ಕ್ರಮ ಅನುಸರಿಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ. ಪರೀಕ್ಷಾ ಕೇಂದ್ರ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಜೊತೆಗೆ ಪೊಲೀಸ್ ಬಂದೋಬಸ್ತ್ ಒದಗಿಸಲಾಗುವುದು ಎಂದು ತಿಳಿಸಿದರು.

# ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಹಿಂದು ಸಮಾಜವನ್ನು ಭಯಭೀತಿಗೊಳಿಸುವ ಹುನ್ನಾರ ನಡೆಯುತ್ತಿದೆ ಎಂದು ಹಿಂದು ಹಿತರಕ್ಷಣಾ ವೇದಿಕೆ ಕಾರ್ಯಕರ್ತರು ಆರೋಪಿಸಿದರು.

ಬಾಗಲಕೋಟೆಯಲ್ಲಿ ಶಿವಾಜಿ ಜಯಂತಿ ಅಂಗವಾಗಿ ನಡೆಯುತ್ತಿದ್ದ ಮೆರವಣಿಗೆಯ ವೇಳೆ ಕಲ್ಲು ತೂರಾಟ ಹಾಗೂ ಚಪ್ಪಲಿ ಎಸೆದ ಘಟನೆ ಖಂಡಿಸಿ ಪೊಲೀಸರಿಗೆ ಮನವಿ ಸಲ್ಲಿಸಿದರು.

ಘಟನೆಯಲ್ಲಿ ಅಲ್ಲಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಅನೇಕರಿಗೆ ಗಾಯಗಳಾಗಿವೆ. ಮೆರವಣಿಗೆ ಮಸೀದಿ ಸಮೀಪಕ್ಕೆ ಬಂದಾಗ ಏಕಾಏಕಿ ಕಲ್ಲು ತೂರಾಟ



ನಡೆದಿದ್ದು, ಕಾನೂನು ರಕ್ಷಣೆ ಮಾಡುವ ಉನ್ನತ ಅಧಿಕಾರಿಗಳ ಮೇಲೆಯೇ ದಾಳಿ ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದರು.

ಇಂತಹ ಘಟನೆಗಳ ಹಿಂದೆ ಪ್ರಬಲ ಮತಾಂಧ ಶಕ್ತಿಗಳ ಹುನ್ನಾರವಿದೆ. ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಇಂತಹ ಕಲ್ಲುತೂರಾಟ ಪ್ರಕರಣಗಳು ಮರುಕಳಿಸುತ್ತಿವೆ ಎಂದು ದೂರಿದರು.

ಚಿಕ್ಕಮಗಳೂರಿನಲ್ಲಿ ಹಿಂದು ದಲಿತ ಮಹಿಳೆಯ ಮನೆ ಮೇಲೆ ನಿರಂತರ ಕಲ್ಲು ತೂರಾಟ ನಡೆಸಿ, ಮನೆಯಲ್ಲಿ ಇದ್ದ ಮಹಿಳೆ ಹಾಗೂ ಯುವತಿಯನ್ನು ಗುರಿಯಾಗಿಸಿಕೊಂಡು ನಿಂದನೆ ಮಾಡಿದ ಘಟನೆ ಕೂಡ ರಾಜ್ಯದಲ್ಲಿ ಉಂಟಾದ ಅಶಾಂತಿಯ ಉದಾಹರಣೆಯಾಗಿದೆ ಎಂದು ತಿಳಿಸಿದರು.

ರಾಜ್ಯದ ವಿವಿಧ ಭಾಗಗಳಲ್ಲಿ ಹಿಂದು ಮೆರವಣಿಗೆ, ದೇವಸ್ಥಾನ, ಗಣಪತಿ ಹಾಗೂ ಓಂಶಕ್ತಿ ಮೆರವಣಿಗೆಗಳ ಮೇಲೆ ಕಲ್ಲು ತೂರಾಟ ನಡೆಯುತ್ತಿರುವುದಾಗಿ ಆರೋಪಿಸಿದ ಅವರು, ಹಿಂದುಗಳನ್ನು ಗುರಿಯಾಗಿಸಿ ಕೋಮುಗಲಭೆ ಸೃಷ್ಟಿಸಲು ಯತ್ನಿಸುತ್ತಿರುವ ಶಕ್ತಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಹಿಂದು ಮುಖಂಡ ರಘು ಸಕಲೇಶಪುರ, ಶಿವು ಜಿಪ್ಪಿ, ಶೇಖರ್ ಸಿದ್ದಾಪುರ ಹಾಗೂ ಸುಪ್ರಿತ್ ಉಪಸ್ಥಿತರಿದ್ದರು.

# ಹಾಸನಾಂಬ ಜಾತ್ರೆ, ವಿದ್ಯುತ್ ಅಲಂಕಾರ ಅವ್ಯವಹಾರ: ತನಿಖೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಜಾತ್ರೋತ್ಸವ ವಿದ್ಯುತ್ ದೀಪಾಲಂಕಾರ ಸೇರಿ ವಿವಿಧ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪ ಸಂಬಂಧ ಲೋಕಾಯುಕ್ತ ತನಿಖೆ ಆರಂಭವಾಗಿದೆ.

ಆರ್‌ಟಿಐ ಕಾರ್ಯಕರ್ತ ಮನು ಎಂಬುವರು ಸಲ್ಲಿಸಿದ ದೂರು ಆಧರಿಸಿ ಲೋಕಾ ಅಧಿಕಾರಿಗಳು ಮಹಾನಗರಪಾಲಿಕೆ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇಂಜಿನಿಯರ್‌ಗಳನ್ನು ವಿಚಾರಣೆ ನಡೆಸಿದರು. ಪಾಲಿಕೆ ಕಚೇರಿ ಆವರಣದಲ್ಲೇ ವಿಚಾರಣೆ ನಡೆಸಿ ದೀಪಾಲಂಕಾರ ಗುತ್ತಿಗೆ ನೀಡಿಕೆಯಲ್ಲಿ ನಿಯಮಾವಳಿ ಪಾಲನೆಯಾಗಿಲ್ಲ ಎಂಬ ಆರೋಪ ಬಗ್ಗೆ ಸಂಪೂರ್ಣ ಮಾಹಿತಿ



ಸಂಗ್ರಹಿಸಲಾಯಿತು.

ದೀಪಾಲಂಕಾರಕ್ಕೆ ಲಕ್ಷಾಂತರ ರೂ.ದುಂದು ವೆಚ್ಚ ಮಾಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಟೆಂಡರ್ ಒಂದರಲ್ಲೇ 15 ಲಕ್ಷಕ್ಕೂ ಅಧಿಕ ಮೊತ್ತದ ಅವ್ಯವಹಾರ ನಡೆದಿದೆ ಎಂದು ಆರೋಪಿಸಲಾಗಿದೆ. ಖರೀದಿಸಿದ ಸಾಮಗ್ರಿ ಮೌಲ್ಯಕ್ಕಿಂತ ಹೆಚ್ಚಾಗಿ ಹಣ ವ್ಯಯಿಸಲಾಗಿದೆ.

ಗ್ರೇಡ್-1 ದೇವಸ್ಥಾನವಾಗಿರುವ ಹಾಸನಾಂಬ ಉತ್ಸವದಲ್ಲಿ ಪ್ರತಿವರ್ಷ ಒಬ್ಬನೇ ಗುತ್ತಿಗೆದಾರನಿಗೆ ಟೆಂಡರ್ ನೀಡಲಾಗುತ್ತಿದೆ ಎಂಬ ಆರೋಪವೂ ಇದ್ದು, ವಿದ್ಯುತ್ ಲೈಟಿಂಗ್ಸ್, ಹೂವಿನ ಅಲಂಕಾರ ಸೇರಿ ಬಹುತೇಕ ಕಾಮಗಾರಿಗಳನ್ನೂ ಒಬ್ಬರಿಗೆ ನೀಡಲಾಗಿದೆ ಎಂದು ದೂರಲಾಗಿದೆ.

ಕೇವಲ ಅನುಭವ ಮಾನದಂಡ ಮುಂದಿಟ್ಟು ನಿರ್ದಿಷ್ಟ ಗುತ್ತಿಗೆದಾರನಿಗೆ ಅನುಕೂಲ ಮಾಡಿಕೊಡಲಾಗಿದೆ. ಹಲವರು ಅರ್ಜಿ ಸಲ್ಲಿಸಿದ್ದರೂ, ಕೇವಲ ಒಬ್ಬರಿಗೇ ಅವಕಾಶ ನೀಡಲಾಗಿದೆ ಎಂದೆಲ್ಲಾ ದೂರವಾಗಿದೆ.

ಲೋಕಾಯುಕ್ತ ಅಧಿಕಾರಿ ಗಾಯತ್ರಿ ಅವರ ನೇತೃತ್ವದಲ್ಲಿ ನಡೆದ ವಿಚಾರಣೆಯಲ್ಲಿ ಪಾಲಿಕೆ ಇಂಜಿನಿಯರ್ ಸುಜಾತ ಹಾಗೂ ನಿವೃತ್ತ ಇಂಜಿನಿಯರ್ ರಂಗಸ್ವಾಮಿ ಅವರನ್ನು ಪ್ರಶ್ನಿಸಲಾಯಿತು.

ಅಗತ್ಯ ದಾಖಲೆ ಸಲ್ಲಿಸುವಂತೆ ಸೂಚಿಸಿದ ತನಿಖಾಧಿಕಾರಿ, ಇಲ್ಲವಾದಲ್ಲಿ ಅದನ್ನೇ ವರದಿಯಲ್ಲಿ ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

# ಆಧಾರ ರಹಿತ ಆರೋಪಕ್ಕೆ ಶಿಕ್ಷೆಯಾಗಲಿ: ಡಾ. ಯತೀಂದ್ರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಧಿಕಾರಿಗಳ ವಿರುದ್ಧ ಆಧಾರ ರಹಿತ ಆರೋಪ ಮಾಡಿದವರಿಗೆ ಶಿಕ್ಷೆಯಾಗಬೇಕು ಎಂದು ಮೈಸೂರಿನ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರ ಬಂಧನವನ್ನು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕಾರಣಿಗಳ ವಿರುದ್ಧ ಆಧಾರ ರಹಿತ ಆರೋಪ ಮಾಡಿದರೆ ಅವರು ಹೇಗೋ ಸಹಿಸಿಕೊಳ್ಳುತ್ತಾರೆ. ಆದರೆ, ಪಾಪ ಅಧಿಕಾರಿಗಳು ಏನು ಮಾಡಬೇಕು. ಇನ್ನೊಬ್ಬರ ಕುರಿತು ತೇಜೋವಧೆ ಮಾಡುವವರ ವಿರುದ್ಧ ಶಿಕ್ಷೆಯಾಗಲೇಬೇಕೆಂದು ಕೆಎಎಸ್ ಅಧಿಕಾರಿ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡಿದ್ದ ಸ್ನೇಹಮಯಿ ಕೃಷ್ಣ ಬಂಧನ ಕುರಿತು ಹೇಳಿದರು.

ಮುಡಾದಲ್ಲಿ ಅವ್ಯವಹಾರ ಆಗಿದೆಯೆಂದು ಆರೋಪಿಸಿದರು. ಆ ಬಗ್ಗೆ ತನಿಖೆ ನಡೆಯುತ್ತಿದೆ. ಏನೇ ಅವ್ಯವಹಾರ ಆಗಿದ್ದರೂ ಕಾನೂನು ಪ್ರಕಾರ ತಪ್ಪಿತಸ್ಥರಿಗೆ ಶಿಕ್ಷೆಯಾಗುತ್ತದೆಂದರು.

ಮುಖ್ಯಮಂತ್ರಿ ಬದಲಾವಣೆ





ವಿಚಾರವಾಗಿ ಏನು ಹೇಳಬೇಕೋ ಅದೆಲ್ಲವನ್ನೂ ಹೇಳಿದ್ದೇನೆ. ಇನ್ನು ಮುಂದೆ ಆ ಬಗ್ಗೆ ಮಾತನಾಡುವುದಿಲ್ಲ. ಈ ವಿಚಾರದ ಕುರಿತು ಏನೇ ಮಾತನಾಡಿದರೂ ಮಾಧ್ಯಮದವರು ವಿವಾದ ಮಾಡುತ್ತಾರೆ. ದಿನಪೂರ್ತಿ ಅದೇ ಚರ್ಚೆ ಮಾಡಲಾಗುತ್ತದೆ. ನಾನು ಏನು ಹೇಳಬೇಕೋ ಅದನ್ನು ಹೇಳಿದ್ದೇನೆ. ಅದರ ಬಗ್ಗೆ ಹೆಚ್ಚು ಮಾತನಾಡುವುದಿಲ್ಲ ಎಂದರು.

### ವಿದೇಶ ಪ್ರವಾಸ ತಪ್ಪಲ್ಲ

ಯಾವ ಶಾಸಕರು, ಯಾವ ಕಾರಣಕ್ಕೆ ವಿದೇಶ ಪ್ರವಾಸ ಹೋಗಿದ್ದಾರೆಂಬುದು ನನಗಂತೂ ಗೊತ್ತಿಲ್ಲ. ಅವರು ಸ್ವಂತ ಹಣದಲ್ಲಿ ಪ್ರವಾಸ ಕೈಗೊಂಡಿದ್ದಾರೆ ಹೊರತು ಸರ್ಕಾರಿ ಹಣ ಪಡೆದಿಲ್ಲ. ವೈಯಕ್ತಿಕ ಪ್ರವಾಸ ಮಾಡುವುದು ತಪ್ಪು ಎನ್ನಲು ಆಗುವುದಿಲ್ಲ. ಮುಖ್ಯಮಂತ್ರಿ ಕುರ್ಚಿಗಾಗಿ ಜಟಾಪಟಿ ನಡೆಯುತ್ತಿದೆ ಎನ್ನುವುದು ಕೇವಲ ಊಹಾಪೋಹ. ರಾಜ್ಯದಲ್ಲಿ ಅಂತಹ ಬೆಳವಣಿಗೆ ಏನೂ ಇಲ್ಲವಾದ್ದರಿಂದಲೇ ಶಾಸಕರು ಆರಾಮಾಗಿ ವಿದೇಶಕ್ಕೆ ಹೋಗಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಗಳಿಗೆ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಸಾರ್ವಜನಿಕರಿಗೆ ಉಚಿತ ಕೊಡುಗೆಗಳನ್ನು ಯಾವ ಹಿನ್ನಲೆಯಲ್ಲಿ ಕೊಡುತ್ತಿದ್ದೇವೆಂಬುದು ಮುಖ್ಯವಾಗುತ್ತದೆ. ಚುನಾವಣೆ ಹತ್ತಿರದಲ್ಲಿದ್ದಾಗ ಉಚಿತ ಕೊಡುಗೆ ನೀಡಿದರೆ ಅದು ಅಭಿವೃದ್ಧಿಗೆ ಮಾರಕವಾಗುತ್ತದೆ ಎಂದರು.

ಆರ್ಥಿಕ ಅಸಮಾನತೆ, ಬೆಲೆ ಏರಿಕೆಯಿಂದ ಸಾಮಾನ್ಯ ಜನರು ಬದುಕಲು ಪರದಾಡುವ ಪರಿಸ್ಥಿತಿ ನಿರ್ಮಾಣವಾದಾಗ ಸರ್ಕಾರಗಳು ನೆರವಿಗೆ ನಿಲ್ಲಬೇಕಾಗುತ್ತದೆ. ಅದು ಬಡವರಿಗೆ ಒಳ್ಳೆಯದು ಮಾಡಿದಂತಾಗುತ್ತದೆ ಹೊರತು ಉಚಿತ ಕೊಡುಗೆಯಾಗುವುದಿಲ್ಲ. ಜನರ ಕೈಗೆ ಹಣ ಸಿಕ್ಕರೆ ಅದನ್ನು ಖರ್ಚು ಮಾಡುತ್ತಾರೆ. ಆರ್ಥಿಕ ಬೆಳವಣಿಗೆಗೆ ಅದು ಸಹಕಾರಿಯಾಗುತ್ತದೆ. ಬೇರೆ ಅಭಿವೃದ್ಧಿ ಮಾಡದೆ ಕೇವಲ ಉಚಿತ ಕೊಡುಗೆ ನೀಡಿದರೆ ತಪ್ಪು. ಕರ್ನಾಟಕ, ತಮಿಳುನಾಡು ಸೇರಿ ಬೇರೆ ರಾಜ್ಯಗಳಲ್ಲಿ ಮೂಲಸೌಕರ್ಯ ಹಾಗು ಸಾಮಾಜಿಕ ಅಭಿವೃದ್ಧಿ ಯೋಜನೆಗಳು ಜಾರಿಯಲ್ಲಿವೆ ಎಂದು ಹೇಳಿದರು.

# ಚಿಕ್ಕಗೊಂಡನಹಳ್ಳಿಯಲ್ಲಿ ಬೋನಿಗೆ ಬಿದ್ದ ಚಿರತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಚಿಕ್ಕಗೊಂಡನಹಳ್ಳಿ ಗ್ರಾಮದ ತೋಟವೊಂದರಲ್ಲಿ ಅರಣ್ಯ ಇಲಾಖೆಯು ಇರಿಸಿದ್ದ ಬೋನಿಗೆ ಗಂಡು ಚಿರತೆ ಬಿದ್ದಿದೆ.

2 ತಿಂಗಳಿಂದ ಗ್ರಾಮದ ಸುತ್ತಮುತ್ತಲ ಹಳ್ಳ-ಕೊಳ್ಳದ ಪ್ರದೇಶ ಹಾಗೂ ತೋಟದ ಸಾಲಿನಲ್ಲಿ ಚಿರತೆ ಕಾಣಿಸಿಕೊಳ್ಳುತ್ತಿದ್ದು ಸ್ಥಳೀಯರಲ್ಲಿ ಆತಂಕ ಮನೆ ಮಾಡಿತ್ತು. ಜಾನುವಾರು ಹಾಗೂ ಬೀದಿ ನಾಯಿಗಳ ಮೇಲೆ ಚಿರತೆ ದಾಳಿ ಮಾಡುತ್ತಿದ್ದು ಈ ಬಗ್ಗೆ ಸ್ಥಳೀಯರು ದೂರು ನೀಡಿದ ಹಿನ್ನೆಲೆ ವಲಯ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಪ್ರಭು ಎಂಬುವವರ ತೋಟದಲ್ಲಿ ಕಳೆದ 2 ದಿನಗಳ ಹಿಂದೆ ಬೋನು ಇರಿಸಿದ್ದರು.

ಗುರುವಾರ ಮಧ್ಯರಾತ್ರಿ ಸುಮಾರಿನಲ್ಲಿ ಆಹಾರ ಹುಡುಕುತ್ತಾ ಬಂದಿರುವ 3 ವರ್ಷದ ಗಂಡು ಚಿರತೆಯು ಕಡೆಗೂ ಬೋನಿಗೆ ಬಿದ್ದಿದೆ. ಸೂಕ್ತ ಯೋಜನೆ ರೂಪಿಸಿ ಚಿರತೆಯನ್ನು ಬೋನಿಗೆ ಬೀಳಿಸುವಲ್ಲಿ ಅರಣ್ಯ ಇಲಾಖೆಯವರು ಯಶಸ್ವಿಯಾಗಿದ್ದು, ಇದರಿಂದ ಗ್ರಾಮಸ್ಥರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

2012 ರಿಂದ ಈವರೆಗೆ ಇದೆ ವ್ಯಾಪ್ತಿಯಲ್ಲಿ ಒಟ್ಟು ನಾಲ್ಕು ಚಿರತೆಗಳನ್ನು ಸೆರೆ ಹಿಡಿದಂತಾಗಿದೆ. ಸದ್ಯಕ್ಕೆ



ಇಲಾಖೆಯಲ್ಲಿ 9 ಬೋನುಗಳಿವೆ. ದೂರು ಬಂದ ವ್ಯಾಪ್ತಿಯಲ್ಲಿ ಅಳವಡಿಸಲಾಗಿದೆ. ಕಾರ್ಯಾಚರಣೆಯಲ್ಲಿ ಇಲಾಖೆಯ ಜೊತೆಗೆ ಸಾರ್ವಜನಿಕರ ಸಹಕಾರ ಮುಖ್ಯ ಎಂದು ವಲಯ ಅರಣ್ಯ ಅಧಿಕಾರಿ ಖಲಂದರ್ ತಿಳಿಸಿದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಇತ್ತೀಚಿನ ವರ್ಷಗಳಿಂದ ತೋಟದ ಮನೆಗಳಲ್ಲಿಯೇ ಸಾರ್ವಜನಿಕರು ವಾಸ ಮಾಡುತ್ತಿದ್ದು ಚಿರತೆಯ ಹಾವಳಿಯು ಆತಂಕ ಸೃಷ್ಟಿಸಿದೆ. ಸರ್ಕಾರದ ಗಮನ ಸೆಳೆದು ಅರಣ್ಯ ಇಲಾಖೆಗೆ ಹೆಚ್ಚಿನ ಬೋನುಗಳ ಜೊತೆಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ತಿಳಿಸಿದರು.

ವಲಯ ಅರಣ್ಯಾಧಿಕಾರಿ ಖಲಂದರ್, ಸಿಬ್ಬಂದಿ ವರ್ಗ ಹಾಗೂ ಸ್ಥಳೀಯರು ಇದ್ದರು.

# ಸರ್ಕಾರಿ ಶಾಲೆ ಉಳಿವಿಗಾಗಿ ದೇವರಾಜಪುರದಲ್ಲಿ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಲೂರು ತಾಲ್ಲೂಕಿನ ದೇವರಾಜಪುರ ಕಿರಿಯ ಪ್ರಾಥಮಿಕ ಶಾಲೆಯನ್ನು ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಲ್ಲಿ ಮುಚ್ಚಲಾಗುತ್ತಿದೆ ಎಂದು ಆರೋಪಿಸಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ನೇತೃತ್ವದಲ್ಲಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಮಾತನಾಡಿ, ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹೆಸರಲ್ಲಿ ದೇವರಾಜಪುರ ಕಿರಿಯ ಪ್ರಾಥಮಿಕ ಶಾಲೆ ಮುಚ್ಚಿ ಇಲ್ಲಿನ ವಿದ್ಯಾರ್ಥಿಗಳನ್ನು ಕಾಮತಿ ಕೂಡಿಗೆಗೆ ಕಳುಹಿಸಲಾಗುತ್ತದೆ. ಈ ರೀತಿ ಜಿಲ್ಲೆಯಲ್ಲಿ 1942 ಶಾಲೆಗಳನ್ನು ಮುಚ್ಚಲು ಪಟ್ಟಿ ತಯಾರಿಸಲಾಗಿದೆ. ರಾಜ್ಯವ್ಯಾಪಿ 40 ಸಾವಿರಕ್ಕೂ ಅಧಿಕ ಸರ್ಕಾರಿ ಶಾಲೆಗಳನ್ನು ಮುಚ್ಚಲಾಗುತ್ತಿದೆ. ಸಾವಿತ್ರಿಬಾಯಿ - ಜ್ಯೋತಿಬಾ ಫುಲೆಯವರ ಹೋರಾಟ ಮತ್ತು ಪರಿಶ್ರಮದ ಫಲವಾಗಿ ಇಂದು ಹಳ್ಳಿಗಳಿಗೆ ಸರ್ಕಾರಿ ಶಾಲೆಗಳು ಆರಂಭವಾಗಿವೆ. ಮಹಾತ್ಮರ ಆಶಯಗಳನ್ನು ಗಾಳಿಗೆ ತೂರಿ ಶಾಲೆಗಳನ್ನು ಮುಚ್ಚಲಾಗುತ್ತಿದೆಯೆಂದು ಆಕ್ರೋಶ ವ್ಯಕ್ತಪಡಿಸಿದರು.

ಅ. 15ರಂದು ಹೊರಡಿಸಿರುವ ಆದೇಶದಲ್ಲಿ ಆಯ್ದ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ 5 ಕಿ.ಮೀ. ವ್ಯಾಪ್ತಿಯ ಶಾಲೆಗಳನ್ನು ಜೋಡಿಸುವುದಾಗಿ ಸ್ಪಷ್ಟಪಡಿಸಿದೆ. ಆದರೆ, ಶಿಕ್ಷಣ ಸಚಿವರು ಒಂದೇ ಒಂದು ಶಾಲೆ ಮುಚ್ಚುವುದಿಲ್ಲ ಎಂದು ಸುಳ್ಳು ಹೇಳುತ್ತ ಇನ್ನೊಂದೆಡೆ ಹಳ್ಳಿಗಳಿಗೆ ಬಸ್ ಬಿಡುವುದಾಗಿ ಹೇಳುತ್ತಿದ್ದಾರೆ. ಈ ಬಸ್ ಒದಗಿಸುವ ಜವಾಬ್ದಾರಿಯನ್ನು ಎಸ್‌ಡಿಎಂಸಿಗೆ ವಹಿಸಲಾಗಿದೆ.

'ಸರ್ಕಾರ' ಶಿಕ್ಷಣದ' ಜವಾಬ್ದಾರಿಯಿಂದ ನುಣುಚಿಕೊಂಡು ಇಡೀ ಸಾರ್ವಜನಿಕ ಶಿಕ್ಷಣವನ್ನು ಕಾರ್ಪೊರೇಟ್ ಕಂಪನಿಗಳಿಗೆ ದಾನ ಮಾಡುವ ಹುನ್ನಾರ ರಚಿಸಿದೆ. ಅದರ ವಿರುದ್ಧ ಒಗ್ಗಟ್ಟಾಗಿ ಹೋರಾಡುವುದೇ ಜನರ ಮುಂದಿರುವ ಪರಿಹಾರವಾಗಿದೆಯೆಂದರು.

ಗ್ರಾಮದ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ಅಧ್ಯಕ್ಷ ಮಲ್ಲೇಶ್ ಮಾತನಾಡಿ, 6ನೇ ತರಗತಿಯಿಂದಲೇ ಕೆಪಿಎಸ್ ಶಾಲೆಯಲ್ಲಿ ಅಡಿಕೆ ಸುಲಿಯುವುದು ಸೇರಿ ಇತರ ಕಸುಬುಗಳನ್ನು ಕಲಿಸುವುದಾಗಿ ಸರ್ಕಾರ ಹೇಳಿದೆ. ಸಮಾಜದ ತಳಸಮುದಾಯದ ಮಕ್ಕಳ ವಿದ್ಯೆ ಕಸಿದು ಕೂಲಿಗೆ ಕಳಿಸುವ ಸರ್ಕಾರದ ಹುನ್ನಾರವನ್ನು ನಾವು ಒಪ್ಪುವುದಿಲ್ಲ. ಈ ಯೋಜನೆ ರದ್ದಾಗುವವರೆಗೂ ನಿರಂತರವಾಗಿ ಹೋರಾಟ ನಡೆಸುತ್ತೇವೆಂದರು.

ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಚೈತ್ರಾ, ಉಪಾಧ್ಯಕ್ಷ ಅಭಿಷೇಕ್, ಚಂದ್ರಶೇಖರ್, ಪ್ರಮೀಳಾ, ರೂಪ, ಗಾಯತ್ರಿ, ಗೌರಮ್ಮ, ಹರೀಶ್, ಚಂದನ, ಲಲಿತಾ ಮತ್ತಿತರರಿದ್ದರು.

# ಕೋಡಿಮಠ ಸಮೀಪದ ಚೆಕ್ ಡ್ಯಾಂ ಕಾಮಗಾರಿ ಕಳಪೆ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾರನಹಳ್ಳಿ: ಅಂತರ್ಜಲ ವೃದ್ಧಿಗಾಗಿ ನಬಾರ್ಡ್ ವತಿಯಿಂದ ಕೋಡಿಮಠ ಸಮೀಪ ನಿರ್ಮಿಸಲಾಗುತ್ತಿರುವ ಚೆಕ್ ಡ್ಯಾಂ ಕಾಮಗಾರಿ ಸಂಪೂರ್ಣ ಕಳಪೆಯಾಗಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಬೇಸಿಗೆ ವೇಳೆ ಜಾನುವಾರುಗಳು ಹಾಗೂ ಕೃಷಿಕರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಚೆಕ್ ಡ್ಯಾಂ ನಿರ್ಮಿಸಲಾಗುತ್ತಿದೆ. ಹಾರನಹಳ್ಳಿ ಕೆರೆ ಕೋಡಿ ನೀರು ಹರಿಯುವ ರಾಜಕಾಲುವೆಗೆ ಸಂಪರ್ಕಿಸುವ ಚೆಕ್ ಡ್ಯಾಂ ನಿರೀಕ್ಷಿತ ಮಟ್ಟದಲ್ಲಿ ನಿರ್ಮಾಣವಾದರೆ ಸಾಕಷ್ಟು ಅನುಕೂಲವಿದೆ. ಆದರೆ, ಕಾಲುವೆಯಲ್ಲಿರುವ ಕುರುಚಲು ಗಿಡಗಳು ಬೆಳೆದು ತನ್ನ ಸ್ವರೂಪವನ್ನೇ ಕಳೆದುಕೊಂಡಿದೆ. ಕಾಮಗಾರಿಗಾಗಿ ಬಳಸಿರುವ ಕಲ್ಲುಗಳನ್ನು ಸರಿಯಾಗಿ ಜೋಡಿಸಿಲ್ಲ. ಬೇಕಾಬಿಟ್ಟಿ ಕೆಲಸ ಮಾಡುತ್ತಿದ್ದಾರೆಂಬ ದೂರುಗಳು ಕೇಳಿಬಂದಿವೆ.

ಮಳೆಗಾಲದಲ್ಲಿ ಕೆರೆ ತುಂಬಿದ ಸಂದರ್ಭದಲ್ಲಿ ಚೆಕ್ ಡ್ಯಾಂನಲ್ಲಿ ನೀರು ಇದ್ದರೆ ಭಾಗದಲ್ಲಿ ಅಂತರ್ಜಲ ಹೆಚ್ಚುತ್ತದೆ. ಅದರಿಂದ ರೈತರಿಗೆ ಸಹಕಾರಿಯಾಗುತ್ತದೆಂದು ಸರ್ಕಾರ ಈ ಕೆಲಸಗಳಿಗೆ ಹೆಚ್ಚು ಅನುದಾನ ನೀಡುತ್ತಿದೆ. ಆದರೆ, ಕಾಲುವೆಯಲ್ಲಿ ಬೆಳೆದ ಗಿಡಗಳನ್ನು ಸರಿಯಾಗಿ ತೆಗೆಯದೆ ಕಾಮಗಾರಿ ಮಾಡುತ್ತಿದ್ದಾರೆ. ಕೆಲವು ಭಾಗಗಳಲ್ಲಿ ಮಣ್ಣು ಜರುಗದಂತೆ ಸರಿಯಾಗಿ ಕಲ್ಲುಪಿಚಿಂಗ್ ಮಾಡಬೇಕು. ಕೋಡಿಮಠದ ಪಕ್ಕ ರಾಜ ಕಾಲುವೆ ಕೆಲಸ ನಡೆಯುತ್ತಿದ್ದು, ಈ ರಸ್ತೆಯಲ್ಲಿ ಜಾನುವಾರು, ರೈತರು ಜಮೀನುಗಳಿಗೆ ತಿರುಗುತ್ತಿದ್ದು ಕಲ್ಲುಗಳು ಕುಸಿಯದ ರೀತಿಯಲ್ಲಿ ರಾಜಕಾಲುವೆ ಇಕ್ಕೆಲಗಳಲ್ಲಿ ಗುಣಮಟ್ಟದ ಕಾಮಗಾರಿ ಮಾಡಬೇಕು.

ಕಾಮಗಾರಿ ವಿವರದ ಬಗ್ಗೆ ನಾಮಫಲಕ ಹಾಕಬೇಕು. ಸಂಬಂಧಿಸಿದ ಇಲಾಖೆಯ ಅಭಿಯಂತರರು ಗುಣಮಟ್ಟಕ್ಕೆ ಆದ್ಯತೆ ನೀಡಬೇಕೆಂದು ಹಾರನಹಳ್ಳಿ ಕೋಡಿಮಠ ವ್ಯಾಪ್ತಿ ಹಾಗು ಹಾರನಹಳ್ಳಿ ಕೆರೆ ಅಚ್ಚುಕಟ್ಟು ಪ್ರದೇಶ ರೈತರು ಆಗ್ರಹಿಸಿದ್ದಾರೆ.

# ಗರ್ಭ ಕೊರಳ ಕ್ಯಾನ್ಸರ್ ತಡೆಗೆ ವ್ಯಾಕ್ಸಿನ್ ಪಡೆಯಿರಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಇತ್ತೀಚಿನ ದಿನಗಳಲ್ಲಿ ಮಹಿಳೆಯರಲ್ಲಿ ಸ್ತನ ಹಾಗು ಗರ್ಭ ಕೊರಳ ಕ್ಯಾನ್ಸರ್ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದು ಸ್ತ್ರೀಯರು ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ ವೈದ್ಯರ ಸಲಹೆ ಪಡೆಯಬೇಕೆಂದು ಹಾಸನ ಸಹ್ಯಾದ್ರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವೈದ್ಯಾಧಿಕಾರಿ ಡಾ. ಭಾರತಿ ರಾಜಶೇಖರ್ ಹೇಳಿದರು.

ಪಟ್ಟಣದ ಕೆಂಪೇಗೌಡ ವೃತ್ತದ ಸಮೀಪದ ಡಾ. ನಾರಾಯಣಸ್ವಾಮಿ ಕ್ಲಿನಿಕ್ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಮಹಿಳೆಯರ ಆರೋಗ್ಯ ತಪಾಸಣೆ, ಸ್ತನ ಕ್ಯಾನ್ಸರ್, ತಪಾಸಣೆ ಮತ್ತು ಹೆಚ್‌ಪಿವಿ ಲಸಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶ ಅಭಿವೃದ್ಧಿ ಹೊಂದಲು ಆರೋಗ್ಯ ಕಾರಣ. ಮಹಿಳೆಯರು ಸ್ತನ ಕ್ಯಾನ್ಸರ್ ಪತ್ತೆ ಹಚ್ಚಲು ಮನೆಯಲ್ಲೇ ಪರೀಕ್ಷೆ ಮಾಡಿಕೊಳ್ಳಬಹುದು. ಸ್ನಾನದ ನಂತರ ಸ್ತನಗಳನ್ನು ಕೈಯಿಂದ ನೋಡಿಕೊಳ್ಳಬಹುದು.

ಆಕಾರದಲ್ಲಿ ವ್ಯತ್ಯಾಸ ಕಂಡುಬಂದರೆ ವೈದ್ಯರ ಸಲಹೆ ಪಡೆಯಬೇಕು. ಅಲ್ಲದೆ ಗರ್ಭ ಕೊರಳ ಕ್ಯಾನ್ಸರ್ ಬಗ್ಗೆ 9 ವರ್ಷದಿಂದ 45 ವರ್ಷದ ಒಳಗೆ ವರ್ಷಕ್ಕೊಮ್ಮೆ ವೈದ್ಯರಲ್ಲಿ ಪರೀಕ್ಷೆ ಕಡ್ಡಾಯವಾಗಿ ಮಾಡಿಸಿಕೊಳ್ಳುವುದು ಒಳ್ಳೆಯದು. ಜನ್ಮ ನೀಡುವ ತಾಯಿ ಆರೋಗ್ಯವಾಗಿದ್ದರೆ ಮುಂದಿನ ಪೀಳಿಗೆಗಳು ಆರೋಗ್ಯವಾಗಿರುತ್ತವೆ. ಈ ನಿಟ್ಟಿನಲ್ಲಿ ಮಹಿಳೆಯರು ಹೆಚ್‌ಪಿವಿ ವ್ಯಾಕ್ಸಿನ್ ಹಾಕಿಸಿಕೊಳ್ಳುವುದುದರಿಂದ ಕ್ಯಾನ್ಸರ್ ಬಾರದಂತೆ ತಡೆಯಬಹುದು, ಗರ್ಭ ಕೊರಳ ಕ್ಯಾನ್ಸರ್ ತಗುಲದಂತೆ ನೋಡಿಕೊಳ್ಳಬೇಕು. ಜೀವನ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಜಂಕ್ ಫುಡ್, ಬೇಕರಿ ಪದಾರ್ಥಗಳಿಂದ ದೂರವಿರಬೇಕು. ಚಿಕ್ಕ ವಯಸ್ಸಿನಲ್ಲಿ ಮದುವೆ, ಧೂಮಪಾನ, ಮದ್ಯಪಾನದಿಂದ ದೂರವಿರಬೇಕೆಂದರು.

ಡಾ. ನಾರಾಯಣಸ್ವಾಮಿ ಕ್ಲಿನಿಕ್‌ನ ವೈದ್ಯಾಧಿಕಾರಿ ಡಾ. ನಾರಾಯಣಸ್ವಾಮಿ ಮಾತನಾಡಿ, ಪ್ರತಿ ತಿಂಗಳು ಮಹಿಳೆಯರು ಸ್ತನ ಕ್ಯಾನ್ಸರ್ ಪರೀಕ್ಷೆ ಮಾಡಿಕೊಳ್ಳಬೇಕು. ಆರಂಭದಲ್ಲಿ ವೈದ್ಯರ ಸಲಹೆ ಪಡೆಯಬೇಕು ಎಂದರು.

ಕಾಫಿ ಬೆಳೆಗಾರರ ಸಂಘದ ತಾಲ್ಲೂಕು ಅಧ್ಯಕ್ಷ ಅದ್ದೂರಿ ಚೇತನ್ ಕುಮಾರ್, ದಂತ ವೈದ್ಯ ಡಾ. ಲೋಕೇಶ್ವರ್, ಶಿವಾನಿ ಮೆಡಿಕಲ್ ಮಾಲೀಕ ಸತೀಶ್ ಮತ್ತಿತರರಿದ್ದರು.

# ನೇತ್ರ ತಪಾಸಣೆ ಕಡ್ಡಾಯವಾಗಿ ಮಾಡಿಸಿಕೊಳ್ಳಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನುಷ್ಯನ ದೇಹದಲ್ಲಿ ಕಣ್ಣು ಅತ್ಯಂತ ಸೂಕ್ಷ್ಮವಾದ ಅಂಗವಾಗಿದ್ದು, ಅದನ್ನು ಸರಿಯಾಗಿ ಸಂರಕ್ಷಿಸಿಕೊಳ್ಳಬೇಕು ಎಂದು ನೇತ್ರ ವೈದ್ಯೆ ಡಾ.ಕೆ.ಆರ್. ಸ್ನೇಹಾ ಹೇಳಿದರು.

ನಗರದ ಆರ್.ಸಿ. ರಸ್ತೆಯಲ್ಲಿರುವ ಗಂಧದ ಕೋಠಿ ಕಾಲೇಜಿನಲ್ಲಿ ಶುಕ್ರವಾರ ವಾಸನ್ ಐ ಕೇರ್ ಕಣ್ಣಿನ ಆಸ್ಪತ್ರೆ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿ, ಮನುಷ್ಯನ ತನ್ನ ಇಷ್ಟಾರ್ಥ ಈಡೇರಿಸಿಕೊಳ್ಳಲು, ಯಾವುದೇ ಸಾಧನೆ ಮಾಡಬೇಕಾದರೂ ಕಣ್ಣಿನ ಸಹಾಯ ಅತ್ಯಗತ್ಯ. ಪ್ರತಿಯೊಬ್ಬ ಮನುಷ್ಯನು ಕಣ್ಣುಗಳನ್ನು ಸಂರಕ್ಷಣೆ ಮಾಡಿಕೊಳ್ಳಬೇಕು. ಇತ್ತೀಚಿನ ದಿನಮಾನಗಳಲ್ಲಿ ಚಿಕ್ಕ ಮಕ್ಕಳಿಗೆ ಅತೀಯಾಗಿ ಮೊಬೈಲ್ ಹಾಗೂ ಇನ್ನಿತರ ಎಲೆಕ್ಟ್ರಾನಿಕ್ ವಸ್ತುಗಳನ್ನು ನೀಡುತ್ತಿರುವುದರಿಂದ ಕಣ್ಣಿನ ಮೇಲೆ ಹೆಚ್ಚು ಒತ್ತಡ ಬೀಳುತ್ತಿರುವುದರಿಂದ ಚಿಕ್ಕ ವಯಸ್ಸಿಗೆ ಕಣ್ಣಿನ ಶಸ್ತ್ರಚಿಕಿತ್ಸೆ ಹಾಗೂ ಇನ್ನಿತರ ಚಿಕಿತ್ಸೆಗೆ ಒಳಗಾಗಬೇಕಾಗಿದೆ. ಇನ್ನು ಕೆಲವು ಸಂಗತಿಗಳಲ್ಲಿ ಕಣ್ಣಿನ ಬಗ್ಗೆ ಸಾಮಾನ್ಯವಾಗಿ ನಿರ್ಲಕ್ಷ್ಯ ವಹಿಸಿ ಅದಕ್ಕೆ ಹಾನಿಯಾದ ಬಳಿಕ ವೈದ್ಯರ ಬಳಿ ಬರುವವರು ಹೆಚ್ಚುತ್ತಿದ್ದಾರೆ. ಸಾಮಾನ್ಯವಾಗಿ ಪ್ರತಿ 6 ತಿಂಗಳಿಗೊಮ್ಮೆ ಕಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು. ಇಲ್ಲವೇ ಮನುಷ್ಯನಿಗೆ 40 ವರ್ಷ ದಾಟಿದ ಮೇಲೆ ಕಡ್ಡಾಯವಾಗಿ ಕಣ್ಣಿನ ಪರೀಕ್ಷೆಗಳನ್ನು ಮಾಡಿಸಿಕೊಳ್ಳಬೇಕು. ಶಿಕ್ಷಣ ಕಣ್ಣುಗಳಿಗೆ ಹೊಸ ಲೋಕವನ್ನು ತೋರಿಸುತ್ತದೆ. ಕಣ್ಣುಗಳ ಮೂಲಕವೇ ನಾವು ಅನುಭವಗಳನ್ನು ಸಂಗ್ರಹಿಸುತ್ತೇವೆ. ಕಣ್ಣುಗಳಂತೆ ಮನಸನ್ನೂ ಸ್ವಚ್ಛವಾಗಿಡಬೇಕು, ಹೆಚ್ಚಾಗಿ ಮೊಬೈಲ್ ಬಳಕೆ ಮತ್ತು ಕಂಪ್ಯೂಟರ್ ಬಳಕೆ ಇಂದಾಗಿ ದೃಷ್ಟಿಗಳ ಸಮಸ್ಯೆ ಹೆಚ್ಚಾಗುತ್ತಿದೆ. ಅದಷ್ಟು 18 ವರ್ಷ ವಯೋಮಿತಿ ಮಕ್ಕಳಿಗೆ ಮೊಬೈಲ್ ಬಳಕೆ ನೀಷೆಧಿಸಿ 14 ವರ್ಷದ ನಂತರ ಕಡ್ಡಾಯವಾಗಿ ಕಣ್ಣು ಪರೀಕ್ಷೆ ಮಾಡಿಸಿಕೋಳ್ಳುವುದು ಉತ್ತಮ. ಕಣ್ಣಿನ ಪೋರೆ ಮತ್ತು ಕಣ್ಣು ಸಮಸ್ಯೆ ಬಂದಾಗ ನಿರ್ಲಕ್ಷಿಸದೆ ವೈದ್ಯರ ಸಲಹೆ ಪಡೆದುಕೋಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಕಣ್ಣು ಮನುಷ್ಯನಿಗೆ ಅತಿ ಮುಖ್ಯವಾದ ಅಂಗವಾಗಿದ್ದು, ಮನುಷ್ಯ ಮೃತಪಟ್ಟ ನಂತರ ಕಣ್ಣುಗಳನ್ನು ದಾನ ಮಾಡಬಹುದಾದ ಅಂಗವಾಗಿದೆ. ಕಣ್ಣುಗಳನ್ನು ಬಹಳ ಸುರಕ್ಷತೆಯಿಂದ ಕಾಪಡಿಕೋಳಬೇಕು, ಕಣ್ಣಿನ ಚಿಕ್ಕಪುಟ್ಟ ಸಮಸ್ಯೆಗಳು ಬಂದಾಗ ಮೂಢನಂಬಿಕೆಯ ಚಿಕಿತ್ಸಾ ಪದ್ಧತಿಗಳನ್ನು ಅನುಸರಿಸದೆ ವೈದ್ಯರ ಸಲಹೆ ಪಡೆದುಕೊಳಬೇಕು. ಉತ್ತಮ ಆಹಾರ ಸೇವನೆಯಿಂದ ಕಣ್ಣುಗಳನ್ನು ಆರೋಗ್ಯವಾಗಿ ಇಟ್ಟುಕೊಳಬಹುದು ಎಂದು ತಿಳಿಸಿದರು.

ಅಧ್ಯಾಪಕರಾದ ಜಿ.ಆರ್. ಮೋಹನ್ ಕುಮಾರ್, ನಂದನ್ ಪಿ., ಡಾ. ಸುರೇಶ್ ಕುಮಾರ್ ಕೆ.ಆರ್., ಉಪನ್ಯಾಸಕರಾದ ಲೋಕೇಶ್, ಕುಶಾಲ್, ದಿಲೀಪ್ ಕುಮಾರ್ ಎಚ್.ಕೆ. ಹಾಗೂ ಇತರರು ಹಾಜರಿದ್ದರು.

# ಜೆಇಇ ಮುಖ್ಯ ಪರೀಕ್ಷೆ: ಸ್ಟೂಡೆಂಟ್ಸ್ ಪಿಯು ಕಾಲೇಜು ಸಾಧನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಪ್ರತಿಷ್ಠಿತ ಕಾಲೇಜುಗಳಲ್ಲಿ ಒಂದಾದ ಸ್ಟೂಡೆಂಟ್ಸ್ ಪಿಯು ಕಾಲೇಜು ಜೆಇಇ ಮುಖ್ಯ ಪರೀಕ್ಷೆಯಲ್ಲಿ ಅಮೋಘ ಸಾಧನೆ ಮಾಡಿದೆ.

ಕಾಲೇಜಿನ ಜಿ.ಪ್ರಣತಿ ಅವರು ಶೇ. 99.06 ಅಂಕ ಪಡೆಯುವ ಮೂಲಕ ಪಡೆಯುವ ಜಿಲ್ಲೆಯ ಮಹಿಳಾ ವಿಭಾಗದಲ್ಲಿ ಪ್ರಥಮ ಸ್ಥಾನ (ಟಾಪರ್-1) ಮತ್ತು ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆಯುವ ಮೂಲಕ ಅಡ್ವಾನ್ಸ್ ಪರೀಕ್ಷೆಗೆ ಅರ್ಹತೆ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಸ್ಟೂಡೆಂಟ್ಸ್ ಕಾಲೇಜಿನಲ್ಲಿ ಒಟ್ಟು 40 ವಿದ್ಯಾರ್ಥಿಗಳು ಅಡ್ವಾನ್ಸ್ ಪರೀಕ್ಷೆಗೆ ಅರ್ಹತೆ ಗಳಿಸಿದ್ದು, ಎಸ್.ಕೆ.ಯುವರಾಜ್ (ಶೇ. 96.81), ಎಂ. ನಿತ್ಯ (ಶೇ. 95.27), ಕುಂದನ್ ಗೌಡ (ಶೇ. 92.64), ಮೋಹಿತ್ ಗೌಡ (ಶೇ. 91.52) ಅಂಕ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಪ್ರತಿವರ್ಷ ಸ್ಟೂಟೆಂಟ್ಸ್ ಪಿಯು ಕಾಲೇಜಿನ ಅಧಿಕ ವಿದ್ಯಾರ್ಥಿಗಳು ಐಐಟಿ ಪ್ರವೇಶ ಪಡೆಯುತ್ತಿದ್ದಾರೆ. ಇನ್ನುಳಿದ ಸಿಇಟಿ, ನೀಟ್, ಎನ್‌ಡಿಎ ಪರೀಕ್ಷೆ ಹಾಗು ಇಲಾಖೆ ಪರೀಕ್ಷೆಯಲ್ಲಿಯೂ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುತ್ತಿದ್ದಾರೆ.

ಜೆಇಇ ಅಡ್ವಾನ್ಸ್‌ಗೆ ಅರ್ಹತೆ ಗಳಿಸಿದ ವಿದ್ಯಾರ್ಥಿಗಳನ್ನು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಹೆಚ್.ಎಸ್.ಮುರಳಿ ಮೋಹನ್, ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಅಭಿನಂದಿಸಿದ್ದಾರೆ.

# ಸಾಧನೆಯ ಸಾಕ್ಷಿ ಮತ್ತು ಸತ್ಯದ ಸವಿ ಮಾತು-ಸಚಿನ್



**ನಾನು ಪ್ರತಿಭಾವಂತನಲ್ಲ, ನಾನು ನಿರಂತರ ಅಭ್ಯಾಸ ಮಾಡುವವನು**

ಈ ಮಾತು ಸಾಧನೆಯ ನಿಜವಾದ ರಹಸ್ಯವನ್ನು ತಿಳಿಸುತ್ತದೆ. ಜನರು ಯಶಸ್ವಿ ವ್ಯಕ್ತಿಗಳನ್ನು ನೋಡಿದಾಗ ಅವರು ವಿಶೇಷ ಪ್ರತಿಭೆಯಿಂದಲೇ ಶಿಖರ ತಲುಪಿದ್ದಾರೆ ಎಂದು ಭಾವಿಸುತ್ತಾರೆ. ಆದರೆ ಸಚಿನ್ ತೆಂಡೂಲ್ಕರ್ ಅವರ ಜೀವನದ ಪಾಠ ಬೇರೆ. ಅವರು ಬಾಲ್ಯದಿಂದಲೇ ಪ್ರತಿದಿನ ಕಠಿಣ ಅಭ್ಯಾಸ ಮಾಡುತ್ತಾ ತಮ್ಮ ಕೌಶಲ್ಯವನ್ನು ಕ್ರಮೇಣ ಅಭಿವೃದ್ಧಿಪಡಿಸಿದರು. ಅನೇಕ ಸೋಲು, ಗಾಯಗಳು ಮತ್ತು ಟೀಕೆಗಳು ಅವರ ದಾರಿಯಲ್ಲಿ ಬಂದರೂ, ಅವುಗಳನ್ನು ಅಡೆತಡೆಗಳೆಂದು ಕಾಣದೆ ಅವಕಾಶಗಳೆಂದು ಕಂಡರು. ಪ್ರತಿಯೊಂದು ತಪ್ಪಿನಿಂದ ಪಾಠ ಕಲಿತು ಮತ್ತಷ್ಟು ಶ್ರಮಿಸಿದರು. ಈ ಸಂದೇಶ ವಿದ್ಯಾರ್ಥಿಗಳಿಗೆ ಅತ್ಯಂತ ಮಹತ್ವದ್ದು ಯಶಸ್ಸು ಅದೃಷ್ಟದಿಂದಲ್ಲ, ನಿರಂತರ ಪರಿಶ್ರಮದಿಂದ ಬರುತ್ತದೆ. ಪ್ರತಿಭೆ ಇದ್ದರೂ ಅದನ್ನು ಬೆಳೆಸಲು ಶಿಸ್ತು ಮತ್ತು ತಾಳ್ಮೆ ಅಗತ್ಯ. ದಿನನಿತ್ಯದ ಸಣ್ಣ ಅಭ್ಯಾಸಗಳು ಭವಿಷ್ಯದಲ್ಲಿ ಮಹತ್ತರ ಸಾಧನೆಗೆ ದಾರಿ ಮಾಡಿಕೊಡುತ್ತವೆ. ನಿರಂತರ ಪ್ರಯತ್ನವೇ ವ್ಯಕ್ತಿಯನ್ನು ಶ್ರೇಷ್ಠತೆಯ ಶಿಖರಕ್ಕೆ ಕೊಂಡೊಯ್ಯುತ್ತದೆ.

**- ಅಂತೋಣಿ ಮುತ್ತು ವಿ, ಶಿಕ್ಷಕರು 7259675543**

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-21

1848: **The Communist Manifesto** ಪ್ರಕಟಣೆ. ಕಾರ್ಲ್ ಮಾರ್ಕ್ಸ್ ಮತ್ತು ಫ್ರಿಡ್ರಿಕ್ ಎಂಗೆಲ್ಸ್ ರಚಿಸಿದ ಈ ಕೃತಿ ವಿಶ್ವ ರಾಜಕೀಯ ಚಿಂತನೆಗೆ ಮಹತ್ವದ ತಿರುವು ನೀಡಿತು.

1916: ಪ್ರಥಮ ಮಹಾಯುದ್ಧದ ಸಮಯದಲ್ಲಿ **Battle of Verdun** ಆರಂಭವಾಯಿತು. ಇದು ಯುರೋಪಿನ ಇತಿಹಾಸದಲ್ಲೇ ಅತ್ಯಂತ ದೀರ್ಘ ಮತ್ತು ರಕ್ತಪಾತದ ಯುದ್ಧಗಳಲ್ಲಿ ಒಂದಾಗಿದೆ.

1952: ಪೂರ್ವ ಪಾಕಿಸ್ತಾನದಲ್ಲಿ (ಇಂದಿನ ಬಾಂಗ್ಲಾದೇಶ) ನಡೆದ ಭಾಷಾ ಹೋರಾಟದಲ್ಲಿ ವಿದ್ಯಾರ್ಥಿಗಳ ತ್ಯಾಗ. ಈ ಹಿನ್ನೆಲೆ ಯುನೆಸ್ಕೋ 21 ಫೆಬ್ರವರಿಯನ್ನು **International Mother Language Day** ಎಂದು ಘೋಷಿಸಿದೆ.

ಜನನ

1894: ಭಾರತೀಯ ಆಧ್ಯಾತ್ಮಿಕ ಗುರು **Meher Baba**

1925: ಜಿಂಬಾಬ್ವೆಯ ಮಾಜಿ ರಾಷ್ಟ್ರಪತಿ **Robert Mugabe**

# ಹಾಸನದ 80 ಅಡಿ ರಸ್ತೆಯಲ್ಲಿ ಬೈಕ್ ವ್ಹೀಲಿಂಗ್ ಹುಚ್ಚಾಟ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಾಮಾಜಿಕ ಜಾಲತಾಣಗಳಲ್ಲಿ ಮೆಚ್ಚುಗೆಗಾಗಿ ಯುವಕರ ಗುಂಪೊಂದು ಸಾರ್ವಜನಿಕ ರಸ್ತೆಯಲ್ಲಿ ಬೈಕ್ ವ್ಹೀಲಿಂಗ್ ಹುಚ್ಚಾಟ ನಡೆಸಿರುವ ಘಟನೆ ನಗರದ 80 ಅಡಿ ರಸ್ತೆಯಲ್ಲಿ ಗುರುವಾರ ನಡೆದಿದೆ.

ಬೆಳಿಗ್ಗೆ 6 ಗಂಟೆ ಸಮಯದಲ್ಲಿ ಏಳೆಂಟು ಯುವಕರು, ರಸ್ತೆಯ ಮಧ್ಯದಲ್ಲೇ ಬೈಕ್ ಎತ್ತಿ ಹುಚ್ಚು ಸಾಹಸ ಮಾಡುತ್ತಾ ಅದನ್ನು ಮೊಬೈಲ್ ಕ್ಯಾಮರಾದಲ್ಲಿ ಸೆರೆ ಹಿಡಿಯುವ ಪ್ರಯತ್ನ ಮಾಡಿದ್ದಾರೆ. ಈ ಬಗ್ಗೆ ಪ್ರಶ್ನಿಸಿದ್ದಕ್ಕೆ ಸಾರ್ವಜನಿಕರ ಮೇಲೆ ಹಲ್ಲೆ ನಡೆಸಲು ಯುವಕರ ಗುಂಪು ಮುಂದಾಗಿದ್ದು ಆತಂಕಕ್ಕೆ ಎಡೆಮಾಡಿಕೊಟ್ಟಿದೆ.

ಈ ದೃಶ್ಯಗಳನ್ನು ಇನ್‌ಸ್ಟಾಗ್ರಾಂ ಹಾಗೂ ಫೇಸ್‌ಬುಕ್‌ನಲ್ಲಿ ಅಪ್ಲೋಡ್ ಮಾಡಿ ಲೈಕ್‌ಗಾಗಿ ಅವರು ಪ್ರಯತ್ನಿಸಿದ್ದಾರೆ ಎನ್ನಲಾಗಿದೆ. ಇದರಿಂದ ಕೆಲಸಕ್ಕೆ ತೆರಳುತ್ತಿದ್ದ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗು ಬೆಳಿಗ್ಗೆ ವಾಕಿಂಗ್ ಮಾಡುವ ನಾಗರಿಕರು ಭಯಭೀತರಾಗಿದ್ದಾರೆ. ವ್ಹೀಲಿಂಗ್ ಮಾಡುವ ವೇಳೆ ಬೈಕ್ ನಿಯಂತ್ರಣ ತಪ್ಪಿದರೆ ಸಂಭವಿಸಬಹುದಾದ ಅಪಘಾತದಿಂದ ಅಮಾಯಕರ ಜೀವಕ್ಕೂ ಅಪಾಯ ಉಂಟಾಗಬಹುದೆಂಬ ಆತಂಕ ವ್ಯಕ್ತವಾಗಿದೆ. 80 ಅಡಿ ರಸ್ತೆ ಮಾತ್ರವಲ್ಲದೆ ಎಂ.ಜಿ. ರಸ್ತೆ, ರಿಂಗ್ ರಸ್ತೆ ಹಾಗೂ ನಗರದ ಹೊರವಲಯ ಪ್ರದೇಶಗಳಲ್ಲಿಯೂ ವ್ಹೀಲಿಂಗ್ ಪುಂಡರ ಹಾವಳಿ ಹೆಚ್ಚಾಗಿದೆ.

ಕೆಲ ಯುವಕರು ಗುಂಪುಗೂಡಿ ರಸ್ತೆ ಖಾಲಿ ಮಾಡಿಸಿ ಬೇರೆಯವರಿಗೆ ಕಿರಿಕಿರಿ ಮಾಡುತ್ತಿರುವುದು ಸಾಮಾನ್ಯವಾಗಿದೆ. ಅದರಿಂದ ಕಾನೂನು ಸುವ್ಯವಸ್ಥೆಗೆ ಸವಾಲಾಗಿದೆ. ಸಾರ್ವಜನಿಕರು ತಕ್ಷಣ 112 ಸಹಾಯವಾಣಿಗೆ ಕರೆ ಮಾಡಿದ ಹಿನ್ನಲೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿದರು. ಪೊಲೀಸರು ಬರುವುದನ್ನು ಗಮನಿಸಿದ ಯುವಕರು ಅಲ್ಲಿಂದ ಪರಾರಿಯಾಗಿದ್ದಾರೆ. ಈ ವೇಳೆ ಗುಂಪು ಗುಂಪಾಗಿ ವಿಡಿಯೋ ವೀಕ್ಷಿಸುತ್ತಿದ್ದವರನ್ನು ಪೊಲೀಸರು ಚದುರಿಸಿ ಪರಿಸ್ಥಿತಿ ನಿಯಂತ್ರಿಸಿದರು.

# ಅಪಘಾತದಲ್ಲಿ ಬೈಕ್, ಸ್ಕೂಟರ್ ಸವಾರರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬೈಕ್ ಹಾಗೂ ಸ್ಕೂಟರ್ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ಇಬ್ಬರೂ ಸವಾರರು ಮೃತಪಟ್ಟಿರುವ ಘಟನೆ ತಣ್ಣೀರುಹಳ್ಳ ಸಮೀಪದ ಗುಡ್ಡೇನಹಳ್ಳಿ ಶ್ರೀದೇವಿ ಪೆಟ್ರೋಲ್ ಬಂಕ್ ಬಳಿ ಬುಧವಾರ ನಡೆದಿದೆ. ಗುಡ್ಡೇನಹಳ್ಳಿ ಗ್ರಾಮದ ರಾಕೇಶ್ ಹಾಗೂ ಮತ್ತೊಬ್ಬರು ಮೃತಪಟ್ಟಿದ್ದಾರೆ. ರಾತ್ರಿ 11.30ರ ಸಮಯದಲ್ಲಿ ರಾಕೇಶ್ ಹಾಸನ ನಗರದಿಂದ ಮನೆಗೆ ಹೋಗುತ್ತಿದ್ದಾಗ ಬೇಲೂರು ಕಡೆಯಿಂದ ವೇಗವಾಗಿ ಬಂದ ಸ್ಕೂಟರ್ ಸವಾರ ಡಿಕ್ಕಿ ಮಾಡಿದ್ದಾನೆ. ಅಪಘಾತದ ರಭಸಕ್ಕೆ ಇಬ್ಬರೂ ಕೆಳಗೆ ಬಿದ್ದಿದ್ದು, ಸಾರ್ವಜನಿಕರು ಆಸ್ಪತ್ರೆಗೆ ದಾಖಲಿಸಲಾಯಿತು.

# ಶಿವಾಜಿ ಮಹಾರಾಜರ ಆದರ್ಶ ಮೈಗೂಡಿಸಿಕೊಳ್ಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಭಾರತದ ಇತಿಹಾಸದಲ್ಲಿ ಛತ್ರಪತಿ ಶಿವಾಜಿ ಮಹಾರಾಜರು ಧೈರ್ಯ, ಶೌರ್ಯ, ಸ್ಥೈರ್ಯ, ರಾಷ್ಟ್ರಪ್ರೇಮ, ನ್ಯಾಯ, ಧರ್ಮಶ್ರದ್ಧೆಗೆ ಹೆಸರಾಗಿದ್ದಾರೆ ಎಂದು ತಹಶೀಲ್ದಾರ್ ಜಿ.ಎಸ್.ಶಂಕರಪ್ಪ ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧದ ಆವರಣದಲ್ಲಿ ತಾಲ್ಲೂಕು ಆಡಳಿತ, ಭಾವಸಾರ ಕ್ಷತ್ರೀಯ ಸಮಾಜ ಮತ್ತು ಮರಾಠ ಸಮಾಜದ ವತಿಯಿಂದ ಆಯೋಜಿಸಿದ್ದ ಛತ್ರಪತಿ ಶಿವಾಜಿ ಮಹಾರಾಜರ 396ನೇ ಜಯಂತೋತ್ಸವದಲ್ಲಿ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರು ಹಿಂದೂ ಧರ್ಮದ ಪ್ರಬಲ ಪ್ರತಿಪಾದಕನಾಗಿದ್ದರೂ ಇತರ ಧರ್ಮಗಳ ಬಗ್ಗೆಗಿನ ಅಪಾರ ಗೌರವವು ಅವರ ಧರ್ಮಸಹಿಷ್ಣುಗೆ ಸಾಕ್ಷಿಯಾಗಿದೆ. ಅವರ ಆಡಳಿತ ವೈಖರಿ, ಭಾಷೆ ಮತ್ತು ಸಂಸ್ಕೃತಿಯ ಬಗ್ಗೆಗಿನ ಚಿಂತನೆ ಎಲ್ಲರಿಗೂ ಮಾದರಿಯಾಗಿದೆ ಇಂತಹ ಮಹಾನ್ ವ್ಯಕ್ತಿಯ ಆದರ್ಶಗಳನ್ನು ಅಳವಡಿಸಿಕೊಂಡಲ್ಲಿ ಮಾತ್ರ ಗೌರವ ಸಲ್ಲಿಸಿದಂತಾಗಲಿದೆ ಎಂದರು.

ಭಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಡಾ.ಎ.ಜಿ.ರಾಜು ಮಾತನಾಡಿ, ರಾಷ್ಟ್ರವನ್ನು ಪರಕೀಯರ ಆಡಳಿತದಿಂದ ಮುಕ್ತಗೊಳಿಸಿ ರಕ್ಷಿಸುವಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಕೊಡುಗೆ ಅಪಾರವಾದದಾಗಿದೆ. ಇಂತಹ ಮಹಾನ್ ವ್ಯಕ್ತಿಯು ಯಾವುದೇ ಒಂದು ಜನಾಂಗಕ್ಕೆ ಮಾತ್ರ ಸೀಮಿತಗೊಳ್ಳದೆ ರಾಷ್ಟ್ರನಾಯಕರಾಗಿ ಧರ್ಮ ರಕ್ಷಣೆಯಲ್ಲಿ ಪ್ರಮುಖ ಪಾತ್ರವಹಿಸಿ ತ್ಯಾಗ, ಬಲಿದಾನದ ಪರಿಣಾಮವಾಗಿ ಇಂದು ಸಮಾಜದಲ್ಲಿ ಜನರು ಶಾಂತಿ, ನೆಮ್ಮದಿಯಿಂದ ಜೀವನ ಸಾಗಿಸಲು ಸಾಧ್ಯವಾಗಿದೆ ಎಂದರು.

ರಾಷ್ಟ್ರದ ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಶಿವಾಜಿಯವರ ಶ್ರಮ ಅವಿಸ್ಮರಣೀಯವಾದುದಾಗಿದೆ. ಅವರು ಕೇವಲ ಮಹಾರಾಷ್ಟ್ರಕ್ಕೆ ಮಾತ್ರ ಸೀಮಿತರಲ್ಲ, ಅವರು ವಿಶ್ವಚೇತನರು. ತಾಯಿ ಜಿಜಾಬಾಯಿ ನೀಡಿದ ಪ್ರೀತಿ, ಶಿಕ್ಷಣ, ಬೆಳೆದ ವಾತಾವರಣ, ಜೀವಾನುಭವ ಶಿವಾಜಿಗೆ ಅಸಾಮಾನ್ಯ ಸಾಧನೆ ಮಾಡುವಂತೆ ಪ್ರೇರಣೆ ನೀಡಿದೆ ಎಂದು ತಿಳಿಸಿದರು.

ಮತ್ತೊಬ್ಬರಿಗೆ ಅಡಿಯಾಳು ಆಗದೆ ನಮ್ಮ ನಾಯಕತ್ವದೊಂದಿಗೆ ನಮ್ಮ ವ್ಯವಸ್ಥೆಯನ್ನು ಮುಂದುವರಿಸುಕೊಂಡು ಹೋಗುವುದೇ ನಿಜವಾದ ಸ್ವರಾಜ್ಯ. ಇಂತಹ ಸ್ವರಾಜ್ಯ ಪರಿಕಲ್ಪನೆಯನ್ನು ಭಾರತದಲ್ಲಿ ಹುಟ್ಟು ಹಾಕಿದ ಮೊದಲ ವ್ಯಕ್ತಿ ಶಿವಾಜಿ. ಅವರ ನಾಯಕತ್ವ ಗುಣ, ಸಾಹಸ ಜೀವನ, ಆಡಳಿತ ಕಾರ್ಯವೈಖರಿಯನ್ನು ಸಮಸ್ತ ದೇಶದ ಜನತೆ ಸ್ಮರಿಸುವಂತಹದ್ದು ಎಂದರು.

ಮುಖಂಡರಾದ ಮಂಜುನಾಥ್ ರಾವ್, ಸಿ.ಜಿ.ಸೋಮಶೇಖರ್, ಮಹೇಶ್, ಮಂಜುನಾಥ ಜಾಧವ್, ಮೆಡಿಕಲ್ ಹರೀಶ್, ಜಗ ಇತರರಿದ್ದರು.

# ಕಾರು-ಬೈಕ್ ಡಿಕ್ಕಿ: ಸವಾರನಿಗೆ ಗಂಭೀರ ಗಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಸೀಕೆರೆ ತಾಲ್ಲೂಕಿನ ಬೇವಿನ ಮರದ ಕೂಡು ಬಳಿ ಗುರುವಾರ ರಾತ್ರಿ ಕಾರು ಚಾಲಕನೊಬ್ಬ ಬೈಕ್‌ಗೆ ಡಿಕ್ಕಿ ಮಾಡಿ ಪರಾರಿಯಾಗಿರುವ ಘಟನೆ ನಡೆದಿದೆ.

ಅಪಘಾತದಲ್ಲಿ ಅರಸೀಕೆರೆ ತಾಲ್ಲೂಕಿನ ಮಂಜೇನಹಳ್ಳಿ ಗ್ರಾಮದ ಪ್ರಶಾಂತ್ ಗಂಭೀರ ಗಾಯಗೊಂಡಿದ್ದು, ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಂಜೇನಹಳ್ಳಿಯ ತೋಟದ ಮನೆಯಿಂದ ಗಂಡಸಿ ಹ್ಯಾಂಡ್ ಪೋಸ್ಟ್‌ಗೆ ಬೈಕ್‌ನಲ್ಲಿ ಹೋಗುತ್ತಿದ್ದಾಗ ಹಿಂದಿನಿಂದ ಬಂದ ಕೆಎ13ಝೆಡ್6126 ನಂಬರ್‌ನ ಕಾರು ಚಾಲಕ ಡಿಕ್ಕಿ ಮಾಡಿ ಪರಾರಿಯಾಗಿದ್ದಾನೆ. ಅಪಘಾತದ ರಭಸಕ್ಕೆ ಕೆಳಗೆ ಬಿದ್ದ ಪ್ರಶಾಂತ್ ಅವರ ಒಂದು ಕಾಲು ಮುರಿದಿದ್ದು, ತಲೆಗೆ ಬಲವಾದ ಪೆಟ್ಟು ಬಿದ್ದಿದೆ. ಕೆಲವು ಹೊತ್ತಿನ ಬಳಿಕ ಸಾರ್ವಜನಿಕರು ಆ್ಯಂಬುಲೆನ್ಸ್ ಮೂಲಕ ಆಸ್ಪತ್ರೆಗೆ ದಾಖಲಿಸಿದ್ದಾರೆ. ಗಂಡಸಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248